# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿವಿಧ ಜಿಲ್ಲಾ/ತಾಲ್ಲೂಕು ಪಂಚಾಯತಿಗಳ ಅವುಗಳ ವ್ಯಾಪ್ತಿಯ ಹಿಂದುಳಿದ ವರ್ಗಗಳ, ವಾಣಿಜ್ಯ ಮತ್ತು ಕೈಗಾರಿಕೆ ಹಾಗೂ ಮೀನುಗಾರಿಕೆ ಇಲಾಖೆಗಳಲ್ಲಿ ತೆರವಾಗಿದ್ದ ಹುದ್ದೆಗಳು ಭರ್ತಿಯಾದ್ದರಿಂದ ವೇತನ/ಬಾಕಿ ವೇತನ ಹಾಗು ದಿನಗೂಲಿ ಸಿಬ್ಬಂದಿಯವರ ವೇತನ/ಉಪಧನ ವೆಚ್ಚಕ್ಕಾಗಿ ಕೊರತೆಯಾಗಿರುವ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014
2. ಆರ್ಥಿಕ ಇಲಾಖೆ ವೆಚ್ಚ 1, 3 ಮತ್ತು 4 ಶಾಖೆಗಳ ಇ-ಆಫೀಸ್ ಕಡತಗಳು

**ಪ್ರಸ್ತಾವನೆ:**

ರಾಜ್ಯದ ವಿವಿಧ ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತಿಗಳ ವ್ಯಾಪ್ತಿಯ ಹಿಂದುಳಿದ ವರ್ಗಗಳ, ವಾಣಿಜ್ಯ ಮತ್ತು ಕೈಗಾರಿಕೆ ಹಾಗೂ ಮೀನುಗಾರಿಕೆ ಇಲಾಖೆಯಲ್ಲಿ ತೆರವಾಗಿದ್ದ ಹುದ್ದೆಗಳು ಭರ್ತಿಯಾಗಿದ್ದರಿಂದ ಬಾಕಿ/ಪ್ರಸಕ್ತ ಸಾಲಿನ ವೇತನ ವೆಚ್ಚಕ್ಕಾಗಿ ಹಾಗೂ ಇಲಾಖೆಗಳಲ್ಲಿ ದಿನಗೂಲಿ ನೌಕರರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರ ವೇತನ ವೆಚ್ಚಕ್ಕಾಗಿ ಪ್ರಧಾನ ಲೆಕ್ಕ ಶೀರ್ಷಿಕೆ 2225, 2405, 2851 ಮತ್ತು 2852ರಡಿ ಒಟ್ಟು ರೂ.75.97ಲಕ್ಷಗಳನ್ನು ಜಿಲ್ಲಾ/ತಾಲ್ಲೂಕು ಪಂಚಾಯತ್ ಕಾರ್ಯಕ್ರಮದಡಿ ಅನುಕ್ರಮವಾಗಿ ರೂ.73.15ಲಕ್ಷ ಹಾಗೂ ರೂ.2.82ಲಕ್ಷಗಳನ್ನು ಹೆಚ್ಚುವರಿಯಾಗಿ ಒದಗಿಸಿ ಬಿಡುಗಡೆಗೊಳಿಸುವಂತೆ ವೆಚ್ಚ ಶಾಖೆಗಳ ಕಡತಗಳಲ್ಲಿ ಪ್ರಸ್ತಾವಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಜಿಲ್ಲಾ ಪಂಚಾಯತ್ ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ರೂ.73.15ಲಕ್ಷಗಳನ್ನು ಶೀರ್ಷಿಕೆ 2515-00-196-1-05-300 ರಡಿ ಮತ್ತು ತಾಲ್ಲೂಕು ಪಂಚಾಯತ್ ಕಾರ್ಯಕ್ರಮದಡಿಯ ವೆಚ್ಚಕ್ಕಾಗಿ ರೂ2.82ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಲು ನಿರ್ಣಯಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 39 ವೆಚ್ಚ 6/2021(ಇ) ದಿನಾಂಕ: 28ನೇ ಜನವರಿ 2021

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧದ ಕಾಲಂ 2ರ ಜಿಲ್ಲಾ/ತಾಲ್ಲೂಕು ಪಂಚಾಯತಿಗಳಿಗೆ ಕಾಲಂ 3 ಕಾರ್ಯಕ್ರಮದಡಿ ಬಾಕಿ/ಪ್ರಸಕ್ತ ಸಾಲಿನ ವೇತನ/ಸಂಭಾವನೆ ವೆಚ್ಚಕ್ಕಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4 ಮತ್ತು 5ರ ಲೆಕ್ಕ ಶೀರ್ಷಿಕೆಯಡಿ ಕಾಲಂ 6ರ ಒಟ್ಟು ರೂ.75.97ಲಕ್ಷ (ರೂಪಾಯಿ ಎಪ್ಪತ್ತೈದು ಲಕ್ಷದ ತೊಂಬತ್ತೇಳು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ. ಈ ರೀತಿ ಬಿಡುಗಡೆಗೊಳಿಸಿದ ಅನುದಾನವನ್ನು ಮೇಲೆ (1) ರಲ್ಲಿ ಓದಲಾದ ಸುತ್ತೋಲೆಯಲ್ಲಿ ನೀಡಿರುವ ನಿರ್ದೇಶನದಂತೆ ಕ್ರಮವಹಿಸಿ ಬಿಲ್ಲುಗಳ ತೀರುವಳಿಗೆ ಕ್ರಮವಹಿಸತಕ್ಕದ್ದು. ಪ್ರಸ್ತುತ ಪ್ರಕರಣಕ್ಕೆ ಆರ್ಥಿಕ ಇಲಾಖೆ ಮರುಹೊಂದಾಣಿಕೆಗೆ ಸಹಮತಿಸಿದೆ ಎಂದು ಭಾವಿಸತಕ್ಕದ್ದು.

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು.)

| ಆರ್ಥಿಕ ಇಲಾಖೆ ಕಡತ ಸಂಖ್ಯೆ | ಜಿಲ್ಲಾ/ತಾಲ್ಲೂಕು ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515-00-196-1-05-300ರಡಿ ಬಿಡುಗಡೆಗೊಳಿಸಿದ ಅನುದಾನ | ಲೆಕ್ಕ ಶೀರ್ಷಿಕೆ 2515-00-197-1-10-300ರಡಿ ಬಿಡುಗಡೆಗೊಳಿಸಿದ ಅನುದಾನ | ಒಟ್ಟು (ರೂ. ಲಕ್ಷಗಳಲ್ಲಿ) |
|---|---|---|---|---|---|
| 1 | 2 | 3 | 4 | 5 | 6 |
| ಆಇ 263 ವೆಚ್ಚ 1/2020(ಇ) | ಮಂಡ್ಯ | 2852-00-101-0-26-005 | 0.63 | | 0.63 |
| ಆಇ 284 ವೆಚ್ಚ 1/2020(ಇ) | ವಿಜಯಪುರ | 2851-00-107-0-27-033 | 10.85 | | 10.85 |
| ಆಇ 43 ವೆಚ್ಚ 3/2021(ಇ) | ಹೊನ್ನಾವರ | 2225-00-103-0-74-005 | | 2.82 | 2.82 |
| ಆಇ 409 ವೆಚ್ಚ 4/2020(ಇ) | ಮಂಡ್ಯ | 2405-00-101-0-26-005 | 2.75 | | |
| | ಬಾಗಲಕೋಟೆ | 2405-00-101-0-26-005 | 12.41 | | |
| | ಚಿತ್ರದುರ್ಗ | 2405-00-101-0-26-005 | 9.85 | | |
| | ಚಾಮರಾಜನಗರ | 2405-00-101-0-26-005 | 0.17 | | 61.67 |
| | ಕಲಬುರಗಿ | 2405-00-101-0-26-005 | 3.51 | | |
| | ಚಿಕ್ಕಬಳ್ಳಾಪುರ | 2405-00-101-0-26-005 | 1.53 | | |
| | ಕೋಲಾರ | 2405-00-101-0-26-033 | 23.73 | | |
| | ಕೊಪ್ಪಳ | 2405-00-101-0-26-033 | 7.72 | | |
| | ಒಟ್ಟು | | 73.15 | 2.82 | 75.97 |

ಈ ಕಾರ್ಯವನ್ನು ಆದ್ಯತೆಯ ಮೇಲೆ ಕ್ರಮವಹಿಸತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಜಿಲ್ಲಾ ಪಂಚಾಯತಿ ಅಥವಾ ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.

ZP: 73.15 → 1415692823
TP: 2.82 → 1415692860
uploaded on 28.1.2021

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಪುರುಷೋತ್ತಮ್ ಸಿಂಗ್ ಬಿ.ಹೆಚ್.)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ) ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಖಜಾನೆ-2, 7ನೇ ಮಹಡಿ, ವಾಣಿಜ್ಯ ತೆರಿಗೆ ಕಟ್ಟಡ, ಗಾಂಧಿನಗರ, ಬೆಂಗಳೂರು-2ರವರಿಗೆ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು,ಹಿಂದುಳಿದ ವರ್ಗಗಳ/ವಾಣಿಜ್ಯ & ಕೈಗಾರಿಕೆ/ಮೀನುಗಾರಿಕೆ ಇಲಾಖೆ
4. ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು
5. ಜಂಟಿ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು
6. ಸಂಬಂಧಿಸಿದ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು
7. ಸಂಬಂಧಿಸಿದ ಜಿಲ್ಲಾ/ಉಪ ಖಜಾನಾಧಿಕಾರಿಗಳು
8. .ರಕ್ಷಾ ಕಡತಕ್ಕೆ
9. ಹೆಚ್ಚುವರಿ ಪ್ರತಿ